ಸಮಾಚಾರ ಸಣ್ಣದಲ್ಲ

ಸೋಲಿನ ಹತಾಶೆಯಿಂದ ಸಂಸ್ಕಾರವಿಲ್ಲದ ಮಾತು

ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ ಸೋಲುವ ಹತಾಶೆಯಿಂದ ಕಾಂಗ್ರೆಸ್ ನಾಯಕರು ಸಂಸ್ಕಾರವಿಲ್ಲದೆ ಮಾತನಾಡುತ್ತಿದ್ದಾರೆ. ಚುನಾವಣೆಯಲ್ಲಿ ಸೋಲು ಖಚಿತವಾಗಿರುವುದರಿಂದ ಉಚಿತ

ಯೋಜನೆಗಳು ಮುಂದೆ ಇರುವುದಿಲ್ಲ ಎಂಬುದು ಖಚಿತವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ಕಾಂಗ್ರೆಸ್ ನಾಯಕರು ಪ್ರಧಾನಿ ನರೇಂದ್ರ ಮೋದಿ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡುತ್ತಿದ್ದಾರೆ. ಸೋಲಿನ ಹತಾಶೆಯಿಂದಾಗಿ ಈ ರೀತಿಯ ಮಾತುಗಳು ಬರುತ್ತಿವೆ. ಸಚಿವ ಶಿವರಾಜ ತಂಗಡಗಿ ಬಿಜೆಪಿಯಲ್ಲಿ ಸಚಿವರಾಗಿದ್ದಾಗ ಸೋನಿಯಾ ಗಾಂಧಿಗೆ ಹೊಡೆಯಿರಿ ಎನ್ನುತ್ತಿದ್ದವರು ಈಗ ಮೋದಿ ಬಗ್ಗೆ ಹೇಳುತ್ತಿದ್ದಾರೆ. ಮುಂದೆ ಜನರೇ ಅವರಿಗೆ ಹೊಡೆಯಲಿದ್ದಾರೆ. ನಾಡಿನ ಸಂಸ್ಕೃತಿಯನ್ನು ಎತ್ತಿಹಿಡಿಯಬೇಕಾದ ಇವರು ಬಾಯಲ್ಲಿ ಸಂಸ್ಕೃತಿ ತೋರಿಸುತ್ತಿದ್ದಾರೆ ಎಂದು ಕಿಡಿಕಾರಿದರು. ಈ ಬಾರಿ ಕಾಂಗ್ರೆಸ್ ಮುಕ್ತ ಭಾರತ ನಿರ್ಮಾಣವಾಗಲಿದೆ. ನರೇಂದ್ರ ಮೋದಿ ಹ್ಯಾಟ್ರಿಕ್ ಗೆಲುವು ನಿಶ್ಚಿತ ಎಂದು ಹೇಳಿದರು.

ತಮಿಳುನಾಡಿನ ಹಿತ ಕಾಪಾಡುವ ಸರಕಾರ

ಗದಗ: ಕಾಂಗ್ರೆಸ್ ಸರಕಾರ ಇಡೀ ವರ್ಷ ತಮಿಳನಾಡಿನ ಹಿತಾಸಕ್ತಿ ಕಾಪಾಡಲು ಸರ್ವ ಪ್ರಯತ್ನ ಮಾಡಿದೆ. ಅವರ ರಾಜಕೀಯ ಮಿತ್ರಪಕ್ಷ ಡಿಎಂಕೆಯವರನ್ನು ಸಂತೈಸುವ ವುದೇ ಕೆಲಸ ಆಗಿದೆ ಎಂದು



ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ರಾಜ್ಯ ದಲ್ಲಿ ತೀವ್ರ ಬರದಿಂದ ಕುಡಿಯಲು ನೀರಿಲ್ಲದಿದ್ದರೂ ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ ನೀರು ಹರಿಬಿಟ್ಟಿರುವ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ಗೆ ಕರ್ನಾಟಕ ಜನರ ಹಿತಾಸಕ್ತಿಗಿಂತ ಡಿಎಂಕೆ ಸಂತೈಸುವದೇ ಪ್ರಮುಖವಾಗಿ ಕಂಡು ಬಂದಿದೆ. ಹಲವಾರು ಬಾರಿ ನಾವು ಈ ಬಗ್ಗೆ ಪ್ರತಿಭಟನೆ ಮಾಡಿದ್ದೇವೆ. ಸರ್ವಪಕ್ಷ ಸಭೆ ಸೇರಿದಂತೆ, ವಿಧಾನಸಭೆಯಲ್ಲೂ ಹೇಳಿದ್ದೇವೆ. ಕರ್ನಾಟಕದ ಜನ ಇಂದು ನೀರಿಗೆ ಪರಿತಪಿಸುತ್ತಿ ದ್ದಾರೆ. ಬರಗಾಲ ಇದೆ. ಬೇಸಿಗೆ ಇದೆ. ಜಲಾನಯನ ಪ್ರದೇಶದ ಜನರಿಗೆ ನೀರಿಲ್ಲ, ಬೆಂಗಳೂರಿನ ಕುಡಿ ಯಲು ಜನತೆಗೆ ನೀರಿಲ್ಲ. ಇಂತಹ ಸಂದರ್ಭದಲ್ಲಿ ಕಾಂಗ್ರೆಸ್‌ನವರಿಗೆ ರಾಜಕೀಯ ಮಹತ್ವದ್ದಾಗಿದೆ. ಇದು ಅತ್ಯಂತ ಖಂಡನೀಯ ಎಂದು ಹೇಳಿದರು.

ಎಸ್.ಎ.ರವೀಂದ್ರನಾಥ್ ನೇತೃತ್ವದಲ್ಲಿ ಚುನಾವಣೆ

ದಾವಣಗೆರೆ: ಸಂಸದ ಜಿ.ಎಂ.ಸಿದ್ದೇಶ್ವರ್ ಅವರು ಮಾಜಿ ಸಚಿವ ಎಸ್.ಎ.ರವೀಂದ್ರನಾಥ್ ಅವರ ನಿವಾಸಕ್ಕೆ ಮೊದಲ ಬಾರಿಗೆ ಭೇಟಿ ನೀಡಿ ಕೆಲ ಕಾಲ ಲೋಕಸಭೆ ಚುನಾವಣೆ ಬಗ್ಗೆ ಮಾತುಕತೆ ನಡೆಸಿ



ದರು. ಸುದ್ದಿಗಾರರೊಂದಿಗೆ ಮಾತನಾಡಿ, ಮಂಗಳವಾರ ಬಿಎಸ್‌ವೈ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಎಸ್.ಎ. ರವೀಂದ್ರ ನಾಥ್ ಅವರ ಸಮ್ಮುಖದಲ್ಲಿ ಚುನಾವಣೆ ಮಾಡಬೇಕೆಂದು ನಿರ್ಧರಿಸಲಾಗಿದೆ. ಚುನಾವಣೆ ತಯಾರಿ ಮಾಡಿಕೊಳ್ಳುತ್ತಿದ್ದೇವೆ ಎಂದು ಹೇಳಿದರು. ಜಿಲ್ಲೆಯ ಎಲ್ಲ ನಾಯಕರು ಒಟ್ಟಾಗಿ ಕೆಲಸ ಮಾಡುತ್ತೇವೆ. ಕ್ಷೇತ್ರದಲ್ಲಿ ನಮ್ಮ ಮನೆಯವರು ಈಗಾಗಲೇ ಪ್ರಚಾರ ಶುರು ಮಾಡಿದ್ದಾರೆ. ಅವರು ಕೂಡ ರೈತ ಮಹಿಳೆಯಾಗಿ ಏಳು ಲೋಕಸಭಾ, ವಿಧಾನಸಭಾ ಚುನಾವಣೆಯಲ್ಲಿ ಗೆಲುವಿಗಾಗಿ ಕೆಲಸ ಮಾಡಿದ್ದಾರೆ. ಎಂ.ಪಿ. ರೇಣುಕಾಚಾರ್ಯ ಅವರ ಮನೆಗೆ ಹೋಗಿ ಮಾತು ಕತೆ ನಡೆಸುವೆ, ಎಲ್ಲವೂ ಕೆಲವೇ ದಿನಗಳಲ್ಲಿ ಸರಿಯಾಗುತ್ತೆ. ಸಭೆಯಲ್ಲಿ ಎಲ್ಲ ನಾಯಕರು ಒಟ್ಟಾಗಿ ಪ್ರಚಾರ ಮಾಡುವ ಕುರಿತು ಚರ್ಚಿಸಿದ್ದೇವೆ ಎಂದರು.

ಲೋಕ ಚುನಾವಣೆಗೂ ಮುನ್ನವೇ ಜೈಲಿಗೆ ಕಳಿಸಿ

ಮೈಸೂರು: ಚುನಾವಣೆಗೂ ಮುನ್ನವೇ ನನ್ನನ್ನು ಜೈಲಿಗೆ ಕಳುಹಿಸುವ ಕೆಲಸವನ್ನು ಸಂಸದ ಪ್ರತಾಪ ಸಿಂಹ ಮಾಡಲಿ ಎಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.



ಲಕ್ಷ್ಮಣ ಸವಾಲು ಹಾಕಿದರು. 'ಲಕ್ಷ್ಮಣ ಅವರನ್ನು ಜೈಲಿಗೆ ಕಳುಹಿಸುವೆ' ಎಂಬ ಪ್ರತಾಪ ಹೇಳಿಕೆಗೆ ಇಲ್ಲಿ ಬುಧವಾರ ತಿರುಗೇಟು ನೀಡಿದ ಅವರು, ಅವರಿಗೆ ಬುದ್ಧಿ ಭ್ರಮಣೆಯಾಗಿದ್ದು, ನಿಮಾನ್ಸ್‌ನಲ್ಲಿ ಸೂಕ್ತ ಚಿಕಿತ್ಸೆ ಕೊಡಿಸಬೇಕಿದೆ. ಟಿಕೆಟ್ ತಪ್ಪಿದ್ದು ಏಕೆ, ಯಾರು ಕಾರಣ ಎಂಬುದನ್ನು ಮೊದಲು ಹೇಳಲಿ. ನೀವು ನನ್ನ ಎದುರಾಳಿಯೇ ಅಲ್ಲ, ನನ್ನ ಬಗ್ಗೆ ಮಾತನಾಡುತ್ತೀರೇಕೆ? ಎಂದರು. ನಾನು ಒಕ್ಕಲಿಗ ಅಲ್ಲ ಎಂಬುದಕ್ಕೆ ಅವರು ದಾಖಲೆ ಕೊಡಲಿ. ನಾವು ಒಕ್ಕಲಿಗನಾಗಿ ಹುಟ್ಟಿದ್ದೇನೆ, ಬೆಳೆಯುತ್ತಾ ವಿಶ್ವಮಾನವ ಆಗಿದ್ದೇನೆ. ಪ್ರತಾಪ ಸಿಂಹ ಹತಾಶರಾಗಿ ನನ್ನ ವಿರುದ್ಧ ಮಾತಾಡುತ್ತಿದ್ದಾರೆ. ನಿಮ್ಮ ವಿರುದ್ಧ ಮಾತನಾಡದಂತೆ ತಡೆಯಾಜ್ಞೆ ತಂದಿರೇಕೆ? ತಡೆಯಾಜ್ಞೆ ತೆರವು ಮಾಡಿಸಿ ಬನ್ನಿ ಇಬ್ಬರ ಚರಿತ್ರೆಯ ಬಗ್ಗೆಯೂ ಮುಕ್ತವಾಗಿ ಚರ್ಚೆ ಮಾಡೋಣ. ಎಚ್.ಡಿ.ದೇವೇಗೌಡ ಅವರನ್ನು ನಾನು ಯಾವತ್ತಾದರೂ ಬೈದಿದ್ದರೆ ತೋರಿಸಿ ಎಂದು ಪ್ರತಾಪಗೆ ಸವಾಲು ಹಾಕಿದರು.

ಸ್ಥಳೀಯ ಮುಖಂಡರ ಮನವೊಲಿಸುವಲ್ಲಿ ಯಡಿಯೂರಪ್ಪ ಯಶಸ್ವಿ | ಜಗದೀಶ್ ಶೆಟ್ಟರ್ ಬೆಂಬಲಿಸಲು ಎಲ್ಲ ಮುಖಂಡರ ಒಪ್ಪಿಗೆ

ಬೆಳಗಾವಿ ಬಿಜೆಪಿ ಬಂಡಾಯ ತಣಿಸುವಲ್ಲಿ ಯಶ

ಬೆಳಗಾವಿ: ಮಾಜಿ ಸಿಎಂ ಜಗದೀಶ್ ಶೆಟ್ಟರ್ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಘೋಷಣೆ ಆಗುತ್ತಿದ್ದಂತೆ ಹುಟ್ಟಿಕೊಂಡಿದ್ದ ಜಿಲ್ಲಾ ಬಿಜೆಪಿ ಮುಖಂಡರ ಬಂಡಾಯ ಶಮನ ಮಾಡುವಲ್ಲಿ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಬಹುತೇಕ ಯಶಸ್ವಿಯಾಗಿದ್ದಾರೆ. ಅಭ್ಯರ್ಥಿ ಪರ ಕೆಲಸ ಮಾಡಬೇಕು ಎಂಬ ಹೈಕಮಾಂಡ್ ನಿರ್ಧಾರಕ್ಕೆ ಬಹುತೇಕ ಎಲ್ಲ ನಾಯಕರು ಒಪ್ಪಿದ್ದಾರೆ.

ಮಂಗಳವಾರ ತಡರಾತ್ರಿ ನಗರದ ಖಾಸಗಿ ಹೋಟೆಲ್‌ಗೆ ಆಗಮಿಸಿದ ಯಡಿಯೂರಪ್ಪ ಜಿಲ್ಲೆಯ ಪ್ರಮುಖ ಮುಖಂಡರ ಜತೆ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಪ್ರಮುಖ ನಾಯಕರು ಶೆಟ್ಟರ್ ಅಭ್ಯರ್ಥಿ ಆಗಿರುವುದಕ್ಕೆ ಬಂಡಾಯದ ಕಾರಣ ಬಿಚ್ಚಿಟ್ಟರು. ಈ ಸಂದರ್ಭದಲ್ಲಿ ಎಲ್ಲರ ಅಭಿಪ್ರಾಯ ಪಡೆದ ಯಡಿಯೂರಪ್ಪ ಒಟ್ಟಾಗಿ ಚುನಾವಣೆ ಗೆಲ್ಲುವ ಕುರಿತು ಸೂಚನೆ ನೀಡಿದ್ದಾರೆ. ಅಷ್ಟೇ ಅಲ್ಲದೆ, ಅನಗತ್ಯ ಗೊಂದಲ ಸೃಷ್ಟಿಸುವ ಮೂಲಕ ಪಕ್ಷದ ಹೈಕಮಾಂಡ್ ನಿರ್ಧಾರಕ್ಕೆ ವಿರುದ್ಧ ಮಾತನಾಡುವ ಕೆಲ ಮುಖಂಡರಿಗೂ ಎಚ್ಚರಿಕೆ ನೀಡಿದ್ದಾರೆ ಎಂದು ತಿಳಿದು ಬಂದಿದೆ.

ಯಡಿಯೂರಪ್ಪ ನಡೆಸಿದ ಸಭೆಯಲ್ಲಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಶಾಸಕ ಅಭಯ್ ಪಾಟೀಲ್, ಶಾಸಕಿ ಶಶಿಕಲಾ ಜೊಲ್ಲೆ, ಹಾಲಿ ಸಂಸದೆ ಮಂಗಳಾ ಅಂಗಡಿ, ಬಿಜೆಪಿ ಟಿಕೆಟ್ ಆಕಾಂಕ್ಷಿ ಆಗಿದ್ದ ಮಹಾಂತೇಶ್ ಕವಟಗಿಮಠ ಸೇರಿ ಮಾಜಿ ಶಾಸಕರು ಹಾಗೂ ಪಕ್ಷದ ಜಿಲ್ಲಾ ಪ್ರಮುಖರು ಸಭೆಯಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಎಲ್ಲ ನಾಯಕರಿಗೆ ಎಚ್ಚರಿಕೆ ನೀಡಿದ ಯಡಿಯೂರಪ್ಪ, ಯಾವುದೇ ಕಾರಣಕ್ಕೂ ಚುನಾವಣೆ ಸಂದರ್ಭದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಬಾರದು. ಎಲ್ಲರೂ ಒಗ್ಗಟ್ಟಿನಿಂದ ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರ ಗೆಲ್ಲಿಸಲು ಕೆಲಸ ಮಾಡಬೇಕು ಎಂದರು.



ಬೆಳಗಾವಿ ನಗರಕ್ಕೆ ಆಗಮಿಸಿದ ಜಗದೀಶ್ ಶೆಟ್ಟರ್ ಹಾಗೂ ಯಡಿಯೂರಪ್ಪ ಅವರನ್ನು ತೆರೆದ ವಾಹನದಲ್ಲಿ ಮೆರವಣಿಗೆ ಮಾಡುವ ಮೂಲಕ ಅದ್ದೂರಿ ಸ್ವಾಗತ ಕೋರಲಾಯಿತು.

ಬೆಳಗಾವಿ ನನಗೆ ಕರ್ಮಭೂಮಿ. ನಾನು ಇಲ್ಲಿಯೇ ಮನೆ ಮಾಡಿಕೊಂಡು ಜನರ ಸೇವೆ ಮಾಡುತ್ತೇನೆ. ಪಕ್ಷದ ಹೈಕಮಾಂಡ್ ಸೂಚನೆಯಂತೆ ನಾನು ಬೆಳಗಾವಿಯಿಂದ ಸ್ಪರ್ಧೆ ಮಾಡುತ್ತಿದ್ದೇನೆ. ಮೊದಲಿನಿಂದಲೂ ನಾನು ಬೆಳಗಾವಿಯ ಜನರ ಜತೆ ಉತ್ತಮ ಒಡನಾಟ ಹೊಂದಿದ್ದು, ಇಲ್ಲಿನ ಜನರ ಆಶೀರ್ವಾದದಿಂದ ಗೆದ್ದೇ ಗೆಲ್ಲುವ ವಿಶ್ವಾಸ ನನಗಿದೆ.

– ಜಗದೀಶ್ ಶೆಟ್ಟರ್, ಬಿಜೆಪಿ ಅಭ್ಯರ್ಥಿ

ಸುಮಲತಾಗೆ ಸೂಕ್ತ ಸ್ಥಾನಮಾನ

ಮಂಡ್ಯ ಲೋಕಸಭಾ ಮತಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಸ್ಪರ್ಧೆ ಮಾಡುವುದು ನಿಶ್ಚಯವಾಗಿರುವುದರಿಂದ ಹಾಲಿ ಸಂಸದೆ ಸುಮಲತಾ ಅವರಿಗೆ ಬೇರೆ ಅವಕಾಶ ಇವೆ. ಅವರು ಸಮಾಧಾನದಿಂದ ಇದ್ದರೇ ಸೂಕ್ತ ಸ್ಥಾನ ಮಾನ ನೀಡಲಾಗುವುದು. ಸುಮಲತಾ ಅಂಬರೀಶ್ ಅವರು ಸ್ಪರ್ಧೆ ಮಾಡುತ್ತಿದ್ದ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಕುಮಾರಸ್ವಾಮಿ ಸ್ಪರ್ಧೆ ಮಾಡಲಿದ್ದಾರೆ. ಆದರೆ ಸುಮಲತಾ ಅವರಿಗೆ ಪಕ್ಷದ ಹೈಕಮಾಂಡ್ ಸೂಕ್ತ ಸ್ಥಾನಮಾನ ನೀಡುತ್ತದೆ ಎಂದು ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಅಭಿಪ್ರಾಯಪಟ್ಟರು.

ಈಗಾಗಲೇ ಜಿಲ್ಲೆಯ ಎಲ್ಲ ನಾಯಕರ ಜತೆ ಮಾತನಾಡಿರುವೆ. ಪಕ್ಷದಲ್ಲಿ ಯಾವುದೇ ಬಂಡಾಯ ಇಲ್ಲ. ಎಲ್ಲರೂ ಒಟ್ಟಾಗಿ ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣೆ ಎದುರಿಸುತ್ತಾರೆ. ಈ ಬಾರಿ ದೇಶದಲ್ಲಿ ಏಕೈಕ ಗ್ಯಾರಂಟಿ ನರೇಂದ್ರ ಮೋದಿ. ಕಾಂಗ್ರೆಸ್ ಗ್ಯಾರಂಟಿ ಎಲ್ಲ ಬುಡಮೇಲು ಆಗಿ ಹೋಗುತ್ತವೆ. ಬಿಜೆಪಿಯ ಬಿರುಗಾಳಿಯಲ್ಲಿ ಕಾಂಗ್ರೆಸ್ ಕೊಚ್ಚಿ ಹೋಗುತ್ತದೆ. ಈ ಸಲವೂ ಕೇಂದ್ರದಲ್ಲಿ ಪ್ರತಿಪಕ್ಷ ಸ್ಥಾನದಲ್ಲಿ ಕುಳಿತುಕೊಳ್ಳಲು ಸಾಧ್ಯವಾಗುವುದಿಲ್ಲ.

– ಬಿ.ಎಸ್.ಯಡಿಯೂರಪ್ಪ, ಮಾಜಿ ಮುಖ್ಯಮಂತ್ರಿ

ಅದ್ದೂರಿ ಬೈಕ್ ರ‍್ಯಾಲಿ

ಬೆಳಗಾವಿ ಲೋಕಸಭಾ ಚುನಾವಣೆ ಟಿಕೆಟ್ ಘೋಷಣೆಯಾದ ನಂತರ ಮೊದಲ ಬಾರಿಗೆ ಜಗದೀಶ್ ಶೆಟ್ಟರ್ ಅವರು ಬೆಳಗಾವಿಗೆ ಭೇಟಿ ನೀಡಿದರು. ಮಾಜಿ ಸಿಎಂ ಯಡಿಯೂರಪ್ಪ ಜತೆಗೂಡಿ ನಗರದ ಪ್ರಮುಖ ದೇವಸ್ಥಾನಗಳಿಗೆ ಭೇಟಿ ನೀಡಿದರು. ಅದ್ದೂರಿ ಬೈಕ್ ರ‍್ಯಾಲಿ ಮೂಲಕ ಸಾವಿರಾರು ಕಾರ್ಯಕರ್ತರು ಜಗದೀಶ್ ಶೆಟ್ಟರ್ ಅವರನ್ನು ಸ್ವಾಗತಿಸಿದರು. ಬುಧವಾರ ಬೆಳಗ್ಗೆ ನಗರಕ್ಕೆ ಆಗಮಿಸಿದ ಜಗದೀಶ್ ಶೆಟ್ಟರ್ ಮೊದಲು ಕೋಟೆ ಕೆರೆ ಪಕ್ಕದ ದುರ್ಗಾದೇವಿ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ನಂತರ ನಗರದ ಪ್ರಮುಖ ವೃತ್ತಗಳಿಗೆ ತೆರಳಿ ಗಣ್ಯರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿದ್ದರು. ತೆರೆದ ವಾಹನದಲ್ಲಿ ಅದ್ದೂರಿ ಮೆರವಣಿಗೆ ಮೂಲಕ ಅಭಿಮಾನಿಗಳು ಜಗದೀಶ್ ಶೆಟ್ಟರ್ ಅವರನ್ನು ಸ್ವಾಗತಿಸುವ ಮೂಲಕ ಯಾವುದೇ ಬಂಡಾಯವಿಲ್ಲವೆಂದು ಜಿಲ್ಲಾ ಮುಖಂಡರು ತೋರಿಸಿಕೊಟ್ಟಿದ್ದು ವಿಶೇಷವಾಗಿತ್ತು.

ರಮೇಶ್‌ಕುಮಾರ್ ನಾವು ಒಟ್ಟಿಗಿದ್ದೇವೆ: ಮುನಿಯಪ್ಪ

ಅಸಮಾಧಾನಿತರ ಟೀಕೆಗಳಿಗೆ ಯಾವುದೇ ಪ್ರತಿಕ್ರಿಯೆ ನೀಡಲ್ಲ

ಬೆಂಗಳೂರು: ಕೋಲಾರ ಲೋಕಸಭಾ ಟಿಕೆಟ್‌ಗೆ ನಡೆಯುತ್ತಿರುವ ವಿದ್ಯಮಾನಗಳಿಗೆ ಸಂಬಂಧಿಸಿದಂತೆ ನಾನು ಪ್ರತಿಕ್ರಿಯಿಸುವುದಿಲ್ಲ. ಪಕ್ಷದ ವರಿಷ್ಠರು ತೀರ್ಮಾನಿಸಲಿದ್ದಾರೆ ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ.

ಕೋಲಾರ ಭಾಗದ ಹಲವು ಶಾಸಕರು ಸೇರಿದಂತೆ ಸಚಿವರೊಬ್ಬರು ರಾಜೀನಾಮೆ ನೀಡಲು ಮುಂದಾಗಿ, ಮುನಿಯಪ್ಪ ವಿರುದ್ಧ ವಾಗ್ದಾಳಿ ನಡೆಸಿದ್ದರು. ಈ ಕುರಿತು ಪ್ರತಿಕ್ರಿಯಿಸಿ, ಚಿಕ್ಕಪೆದ್ದಣ್ಣ ಅವರಿಗೆ ಟಿಕೆಟ್ ನೀಡುವುದನ್ನು ವಿರೋಧಿಸಿ ರಾಜೀನಾಮೆ ನೀಡುತ್ತಿರುವುದು ಏಕೆ ಎನ್ನುವುದನ್ನು ಶಾಸಕರ ಬಳಿಯೇ ಕೇಳಬೇಕು. ರಮೇಶ್ ಕುಮಾರ್ ಮತ್ತು ನಾವು ಎಲ್ಲ ಒಟ್ಟಿಗಿದ್ದೇವೆ.

ಸಚಿವರೂ ಜತೆಗಿದ್ದಾರೆ. ಒಟ್ಟಿಗೆ ತೀರ್ಮಾನವಾಗಿದೆ. ಎಲ್ಲರೂ ಒಟ್ಟಿಗೆ ಕೆಲಸ ಮಾಡಿ ಗೆಲ್ಲಿಸುವುದಾಗಿ ಹೇಳಿದ್ದೆವು. ಮುಖ್ಯಮಂತ್ರಿ, ಉಪಮುಖ್ಯ ಮಂತ್ರಿ ಮುಂದೆ ಈ ರೀತಿ ಮಾತನಾಡಿದ್ದೇವೆ. ಇಷ್ಟಾದರೂ ಹೈಕಮಾಂಡ್ ತೀರ್ಮಾನಕ್ಕೆ ಬದ್ಧರಾಗಿರುತ್ತೇವೆ. ರಾಜ್ಯದಲ್ಲಿ ಕಾಂಗ್ರೆಸ್ ಗೆಲ್ಲಿಸಬೇಕು. ಅದಕ್ಕಾಗಿ ಒಟ್ಟಿಗೆ ಕೆಲಸ ಮಾಡುತ್ತೇವೆ ಎಂದರು.

ಅಸಮಾಧಾನಿತ ಶಾಸಕರ ಟೀಕೆ ಕುರಿತು ಪ್ರತಿಕ್ರಿಯೆ ನೀಡಿದ ಮುನಿಯಪ್ಪ, ಜನ ನನ್ನನ್ನು ಏಳು ಸಲ ಗೆಲ್ಲಿಸಿದ್ದಾರೆ. ನಾನೇ ಸಾಕಷ್ಟು ಜನರನ್ನು ಶಾಸಕರನ್ನಾಗಿ ಮಾಡಿದ್ದೇನೆ. ಕೋಲಾರ ಟಿಕೆಟ್ ವಿಚಾರ ಸಂಬಂಧ ಶಾಸಕರ ಟೀಕೆಗೆ ನಾನು ಉತ್ತರಿಸುವುದಿಲ್ಲ.

ಎಲ್ಲವನ್ನೂ ಸಿಎಂ, ಡಿಸಿಎಂ ನಿರ್ಧಾರ ಮಾಡಲಿದ್ದಾರೆ. ಸಚಿವ ಸುಧಾಕರ್ ಸೇರಿದಂತೆ ಅಸಮಾಧಾನಿತ ಶಾಸಕರ ಹೇಳಿಕೆಗೆ ಯಾವುದೇ ಪ್ರತಿಕ್ರಿಯೆ ಕೊಡುವುದಿಲ್ಲ. ಈಗ ನಾನು ಏನೂ ಹೇಳುವುದಿಲ್ಲ. ಸಿಎಂ ಹಾಗೂ ಡಿಸಿಎಂ ತೀರ್ಮಾನ ಮಾಡುತ್ತಾರೆ ಎಂದು ಸ್ಪಷ್ಟಪಡಿಸಿದರು.

ಅವರಷ್ಟು ಕೀಳುಮಟ್ಟಕ್ಕೆ ಇಳಿಯುವುದಿಲ್ಲ

ವಿಧಾನಪರಿಷತ್ ಸದಸ್ಯ ನಜೀರ್ ಅಹ್ಮದ್ ಅವರು ಬಳಸಿದ್ದ ಪುಟಗೋಸಿ ಪದಕ್ಕೆ ಪ್ರತಿಕ್ರಿಯಿಸಿದ ಮುನಿಯಪ್ಪ, ಕೋಪದಲ್ಲಿ ಸಣ್ಣತನದ ಮಾತನಾಡುತ್ತಾರೆ. ನಾನು ಅವರಷ್ಟು ಕೆಳಮಟ್ಟಕ್ಕೆ ಇಳಿದು ಮಾತನಾಡುವುದಿಲ್ಲ. ನಾನು ರಾಷ್ಟ್ರಮಟ್ಟದಲ್ಲಿ ರಾಜಕಾರಣ ಮಾಡಿದ್ದೇನೆ. ಹತ್ತು ವರ್ಷ ಕೇಂದ್ರ ಸಚಿವನಾಗಿದ್ದೆ. ಅವರ ಯಾವುದೇ ಹೇಳಿಕೆಗಳಿಗೆ ಪ್ರತಿಕ್ರಿಯಿಸುವುದಿಲ್ಲ, ಅವರೆಲ್ಲರೂ ನಮಗೆ ಸಹಕಾರ ಮಾಡಬೇಕು. ನಮ್ಮ ಅಭ್ಯರ್ಥಿ ನೂರಕ್ಕೆ ನೂರು ಈ ಬಾರಿ ಗೆಲ್ಲುತ್ತಾರೆ. ಈ ಬಗ್ಗೆ ಅಧ್ಯಕ್ಷರೊಂದಿಗೆ ಚರ್ಚಿಸಿದ್ದೇನೆ. ಎಲ್ಲ ಸಮಸ್ಯೆ ಪರಿಹಾರವಾಗಲಿದೆ ಎಂದು ತಿಳಿಸಿದರು.

18,171 ಕೋಟಿ ಪೈಕಿ ಒಂದು ರುಪಾಯಿ ಕೊಟ್ಟಿಲ್ಲ

ಕೇಂದ್ರದಿಂದ ನಯಾ ಪೈಸೆ ಬರ ಪರಿಹಾರವು ಬಂದಿಲ್ಲ

ಮೈಸೂರು: ಪ್ರಧಾನಿ ನರೇಂದ್ರ ಮೋದಿಯವರು ಕಾಗೆ ಬೆಳ್ಳಗಿದೆ ಎಂದರೇ ಬಿಜೆಪಿಯವರು ಬೆಳ್ಳಗಿದೆ ಎನ್ನುತ್ತಾರೆ. ನಾಯಿಗೆ ಬಾಲ ಇಲ್ಲ ಅಂದರೆ ಹೌದು ಇಲ್ಲ ಅಂತಾರೆ. ಇದು

ಬಿಜೆಪಿ ಯವರ ಕೆಲಸ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಂಗ್ಯವಾಡಿದರು.

ಮೈಸೂರಿನ ವಿದ್ಯಾರಣ್ಯಪುರಂ ಬಡಾವಣೆಯ ಭೂತಾಳೆ ಮೈದಾನದಲ್ಲಿ ಬುಧವಾರ ಆಯೋಜಿಸಲಾಗಿದ್ದ ವಿವಿಧ ಪಕ್ಷಗಳ ಮುಖಂಡರ ಕಾಂಗ್ರೆಸ್ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಯವ್ಯಯದಲ್ಲಿ ಭದ್ರಾ ಮೇಲ್ದಂಡೆಗೆ 5300 ಕೋಟಿ ರುಪಾಯಿ ಕೊಡುತ್ತೇವೆ ಎಂದರು. ಈವರೆಗೂ ಒಂದೇ ಒಂದು ಪೈಸೆ ಬಂದಿಲ್ಲ, ನಿಮಗೆ ದೇವರ ಮೇಲೆ ನಂಬಿಕೆ ಇದ್ದರೆ ಪ್ರಮಾಣ ಮಾಡಲಿ ನೋಡೋಣ. ಅವರ ಬಜೆಟ್ ರೀಡಿಂಗ್ ನಾನು ಪ್ರದರ್ಶನ ಮಾಡುತ್ತೇನೆ ಎಂದು ಹೇಳಿದರು.

ರಾಜ್ಯದ 224 ತಾಲೂಕುಗಳು ಬರ ಅನುಭವಿಸಿವೆ. ಆದರೆ, ಕೇಂದ್ರ ಸರಕಾರವು 18,171 ಕೋಟಿ ಪೈಕಿ ಒಂದು ರುಪಾಯಿ ಕೊಡಲಿಲ್ಲ. ಎನ್‌ಡಿಆರ್‌ಎಫ್ ಹಣ ಕೊಟ್ಟಿಲ್ಲ. ಬೆಂಗಳೂರು ಅಭಿವೃದ್ಧಿಗೆ, ಫೆರಿಫೆರಲ್ ರಸ್ತೆ ಯೋಜನೆಗಳಿಗೆ 11,495 ಕೋಟಿ ಕೊಡಲಿಲ್ಲ. ಕರ್ನಾಟಕಕ್ಕೆ ಅನ್ಯಾಯ ಮಾಡಿದ ಬಿಜೆಪಿಯವರಿಗೆ ಓಟು ಕೊಡಬೇಕಾ? ಈ ಬಗ್ಗೆ ಪ್ರತಾಪ್ ಸಿಂಹ ಮಾತನಾಡಿದ್ದಾನಾ? ಅವರದ್ದು ಬರೀ ಪ್ರಲಾಪ ಎಂದು ಲೇವಡಿ ಮಾಡಿದರು.

ಎಸ್‌ಟಿಎಸ್ ಮಧ್ಯಸ್ಥಿಕೆ; ರಾಜೀವ್ ಸೇರ್ಪಡೆ

ರಾಜೀವ್ ಅವರು ಕಾಂಗ್ರೆಸ್ ಸೇರ್ಪಡೆ ವಿಚಾರ ಕುರಿತು ಎಸ್.ಟಿ.ಸೋಮಶೇಖರ್ ನನ್ನ ಗಮನಕ್ಕೆ ತಂದರು. ಪಕ್ಷದ ಸಿದ್ಧಾಂತ ಒಪ್ಪಿ ಬರುವುದಾದರೆ ಸ್ವಾಗತ ಎಂದಿದ್ದೆ. ಮಲ್ಲೇಶ್ ನಮ್ಮ ಜತೆಯಲ್ಲಿ ಇದ್ದವರು. ಅವರು ಕೂಡ ಜೆಡಿಎಸ್ ತೊರೆದು ಕಾಂಗ್ರೆಸ್ ಸೇರಿದ್ದಾರೆ. ಭೈರಪ್ಪ ಹಾಗೂ ಓಂಪ್ರಕಾಶ್ ಕೂಡ ಕಾಂಗ್ರೆಸ್ ಸಿದ್ಧಾಂತ ಒಪ್ಪಿ ಬಂದಿದ್ದಾರೆ, ಅವರೆಲ್ಲರಿಗೂ ಸ್ವಾಗತ. ಇದರಿಂದ ಕಾಂಗ್ರೆಸ್‌ಗೆ ಶಕ್ತಿ ಬಂದಿದೆ. ಕೃಷ್ಣರಾಜ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿ ಲಕ್ಷ್ಮಣ್ ಗೆ ಹೆಚ್ಚಿನ ಮತ ಬರಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಎರಡು ಗಂಟೆ ಸೋಮಣ್ಣ-ಮಾಧುಸ್ವಾಮಿ ಚರ್ಚೆ

ಸೋಮಣ್ಣ ಮನವೊಲಿಕೆಗೆ ಜಗ್ಗದ ಜೆಸಿ ಮಾಧುಸ್ವಾಮಿ

ತುಮಕೂರು: ಬಿಜೆಪಿ ಟಿಕೆಟ್ ಕೈ ತಪ್ಪಿದ್ದರಿಂದ ಅಸಮಾಧಾನಗೊಂಡಿದ್ದ ಮಾಜಿ ಸಚಿವ ಜೆ.ಸಿ. ಮಾಧುಸ್ವಾಮಿ ಅವರ ಚಿ.ನಾ.ಹಳ್ಳಿ ತಾಲೂಕು ಜೆ.ಸಿ.ಪುರ ನಿವಾಸಕ್ಕೆ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ಭೇಟಿ ನೀಡಿ ಸುಮಾರು ಎರಡು ಗಂಟೆಗೂ ಅಧಿಕ ಕಾಲ ಚರ್ಚೆ ನಡೆಸಿದರು.

ಈ ವೇಳೆ ಮಾಧುಸ್ವಾಮಿ ಮಾತನಾಡಿ, ನನ್ನ ನಿರ್ಧಾರ ಬದಲಿಸಲ್ಲ. ನನ್ನ ನಿರ್ಧಾರಕ್ಕೆ ನಾನು ಬದ್ಧ. ನನಗೆ ಟಿಕೆಟ್ ನೀಡುತ್ತೇವೆಂದು ಹೇಳಿ ಮೋಸ ಮಾಡಿರುವುದು ತುಂಬಾ ನೋವಾಗಿದೆ. ಹಾಲಿ ಸಂಸದ ಬಸವರಾಜ್ ಮಾತ್ರ ಜಿಲ್ಲೆಯಲ್ಲಿ ಬಿಜೆಪಿ ಮುಖಂಡರಲ್ಲ, ನೀವು ಅವರೊಂದಿಗೆ ಹೋದರೆ ಚುನಾವಣೆ ಮಾಡಲು ಸಾಧ್ಯವಿಲ್ಲ. ಹಲವು ಬಿಜೆಪಿ ಮುಖಂಡರು ಜಿಲ್ಲೆಯಲ್ಲಿದ್ದಾರೆ, ಅವರ ವಿಶ್ವಾಸವನ್ನು ನೀವು ಗಳಿಸಿಲ್ಲ ಎಂದು ಸೋಮಣ್ಣ ವಿರುದ್ಧ ಹರಿಹಾಯ್ದಿದ್ದಾರೆ ಎನ್ನಲಾಗಿದೆ.

ಮಾಜಿ ಸಚಿವ ಮಾಧುಸ್ವಾಮಿ ಹಾಗೂ ಸೋಮಣ್ಣ ಚರ್ಚೆ ನಡೆಸಿದರು.

ಬಿಜೆಪಿ ಅಭ್ಯರ್ಥಿಯಾಗಿ ಸೋಮಣ್ಣ ತುಮಕೂರು ಕ್ಷೇತ್ರದಿಂದ ಸ್ಪರ್ಧಿಸುವುದನ್ನು ತೀವ್ರವಾಗಿ ವಿರೋಧಿಸಿದ್ದ ಮಾಧುಸ್ವಾಮಿ ಅವರು ಟಿಕೆಟ್ ಘೋಷಣೆ ಆರಂಭದಲ್ಲಿ ಸೋಮಣ್ಣ ತಮ್ಮ ಮನೆಗೆ ಭೇಟಿ ನೀಡುವುದಕ್ಕೂ ವಿರೋಧಿಸಿ, ತಮಗೆ ಟಿಕೆಟ್ ತಪ್ಪಿಸಿದರೆಂದು ಯಡಿಯೂರಪ್ಪ ಅವರ ವಿರುದ್ಧ ಹರಿಹಾಯ್ದಿದ್ದರು.

ಏಪ್ರಿಲ್ 1ಕ್ಕೆ ಸೋಮಣ್ಣ ನಾಮಪತ್ರ ಸಲ್ಲಿಕೆ

ಸಿದ್ದಗಂಗಾ ಮಠದ ಹಿರಿಯ ಶ್ರೀಗಳಾದ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರ ಜನ್ಮದಿನವಾದ ಏಪ್ರಿಲ್ 1 ರಂದು ಸಾಂಕೇತಿಕವಾಗಿ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ಅವರು ಉಮೇದುವಾರಿಕೆ ಸಲ್ಲಿಸುತ್ತಿದ್ದು, ಏ.3 ರಂದು ಬಿಜೆಪಿ-ಜೆಡಿಎಸ್ ಮೈತ್ರಿ ನಾಯಕರು, ಬೆಂಬಲಿಗರೊಂದಿಗೆ ಬೃಹತ್ ರೋಡ್ ಶೋ ರ‍್ಯಾಲಿ ಮೂಲಕ ನಾಮಪತ್ರ ಸಲ್ಲಿಸಲಿದ್ದಾರೆ ಎಂದು ತಿಳಿದು ಬಂದಿದೆ. ಆ ವೇಳೆ ರಾಜ್ಯದ ಪ್ರಮುಖ ನಾಯಕರೆಲ್ಲ ಭಾಗವಹಿಸುವ ಸಾಧ್ಯತೆ ಇದೆ ಎಂದು ಬಿಜೆಪಿ ಮುಖಂಡರು ತಿಳಿಸಿದ್ದಾರೆ.

ನಾಲ್ಕು ಬಾರಿ ಗೆದ್ದ ಎಸ್.ಬಿ.ಪಾಟೀಲ ದಾಖಲೆ ಮುರಿಯುವ ತವಕದಲ್ಲಿ ಗದ್ದಿಗೌಡರ ಹಿರಿಯರನ್ನು ಸೋಲಿಸಿ ಸಂಸತ್ ಪ್ರವೇಶಿಸುವ ಉತ್ಸಾಹದಲ್ಲಿ ಸಂಯುಕ್ತಾ ಪಾಟೀಲ

ಗೆದ್ದು ಇತಿಹಾಸ ನಿರ್ಮಿಸುವರೇ ಗದ್ದಿಗೌಡರ?

ಅಭಿಷೇಕ ಪಾಟೀಲ ಬಾಗಲಕೋಟೆ

ಬಾಗಲಕೋಟೆ ಲೋಕಸಭೆ ಕ್ಷೇತ್ರದಿಂದ ಇಲ್ಲಿಯವರೆಗೆ ಕಾಂಗ್ರೆಸ್ ಹಾಗೂ ಬಿಜೆಪಿಯ ಒಬ್ಬರೇ ಅಭ್ಯರ್ಥಿ ಸತತ ನಾಲ್ಕು ಬಾರಿ ಗೆಲುವು ಸಾಧಿಸಿದ್ದು, ಈ ಬಾರಿ ಗದ್ದಿಗೌಡರ ಗೆಲುವು ಸಾಧಿಸಿದರೆ ಇತಿಹಾಸ ನಿರ್ಮಾಣವಾಗಲಿದೆ. ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಗೆದ್ದರೆ ಕಿರಿ ವಯಸ್ಸಿನ ವರೊಬ್ಬರು, ನಾಲ್ಕು ಬಾರಿ ಗೆದ್ದ ಗದ್ದಿಗೌಡರ ಸೋಲಿಸುವ ಮೂಲಕ ಅವರೂ ಇತಿಹಾಸ ನಿರ್ಮಾಣ ಮಾಡ ಲಿದ್ದಾರೆ. ಸಂಸದ ಹಾಗೂ ಬಿಜೆಪಿ ಅಭ್ಯರ್ಥಿ ಪಿ.ಸಿ.ಗದ್ದಿಗೌಡರ 2004 ರಿಂದ ಇಲ್ಲಿಯವ ರೆಗೆ ಸತತ ನಾಲ್ಕು ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದು, 5ನೇ ಬಾರಿ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ. ಒಂದು ವೇಳೆ ಅವರು ಈ ಚುನಾವಣೆಯಲ್ಲೂ ಗೆಲುವು ಸಾಧಿಸಿದರೆ ಕಾಂಗ್ರೆಸ್‌ನ ಎಸ್.ಬಿ. ಪಾಟೀಲ ಅವರ ದಾಖಲೆಯನ್ನು ಮುರಿಯಲಿದ್ದಾರೆ.



5ನೇ ಬಾರಿ ಅಭ್ಯರ್ಥಿ

ನಾಲ್ಕು ಬಾರಿ ಸಂಸತ್ ಪ್ರವೇಶಿಸಿರುವ ಪಿ.ಸಿ.ಗದ್ದಿಗೌಡರ ಅವರಿಗೆ ಬಿಜೆಪಿ ಮತ್ತೊಮ್ಮೆ ಟಿಕೆಟ್ ನೀಡುವ ಮೂಲಕ 2024ರ ಲೋಕಸಭೆ ಚುನಾವಣೆಗೆ ಅವರನ್ನು ಧುಮಿಕಿ ಸಿದೆ. ಅವರ ವಿರುದ್ಧ ಸಚಿವ ಶಿವಾನಂದ ಪಾಟೀಲ ಅವರ ಪುತ್ರಿ ಸಂಯುಕ್ತಾ ಪಾಟೀಲ ಅವರಿಗೆ ಕಾಂಗ್ರೆಸ್ ಟಿಕೆಟ್ ನೀಡುವ ಮೂಲಕ ಕಿರಿಯ ವಯಸ್ಸಿನ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಗದ್ದಿಗೌಡರ ಗೆದ್ದರೆ 5ನೇ ಬಾರಿ ಗೆದ್ದ ಮೊದಲ ವ್ಯಕ್ತಿಯಾಗಲಿದ್ದಾರೆ.

ಕಾಂಗ್ರೆಸ್‌ನ ಭದ್ರಕೋಟೆಯಾಗಿದ್ದ ಬಾಗಲಕೋಟೆ ಲೋಕಸಭಾ ಕ್ಷೇತ್ರ 2004ರ ವರೆಗೆ ಕೇವಲ ಮೂರ‍್ನಾಲ್ಕು ಅಭ್ಯರ್ಥಿಗಳು ಗೆಲುವು ಸಾಧಿಸಿದ್ದರು. ಆದರೆ, 2004 ರಿಂದ ಬಿಜೆಪಿ ಸತತ ಗೆಲುವು ದಾಖಲಿಸುವ ಮೂಲಕ ಲೋಕಸಭಾ ಕ್ಷೇತ್ರವನ್ನು ಬಿಜೆಪಿ ಭದ್ರಕೋಟೆಯನ್ನಾಗಿಸಿದೆ.

ಜಿಲ್ಲೆಯ ಬೀಳಗಿ ತಾಲೂಕಿನ ಸುಣಗ ಗ್ರಾಮದ ಎಸ್.ಬಿ.ಪಾಟೀಲ ಅವರು 1962 ರಿಂದ 1997ರ ವರೆಗೆ ಸತತ ನಾಲ್ಕು ಬಾರಿ ಕಾಂಗ್ರೆಸ್‌ನಿಂದ ಗೆಲುವು ದಾಖಲಿ ಸುವ ಮೂಲಕ ಇತಿಹಾಸ ನಿರ್ಮಿಸಿದ್ದರು. ಆದರೆ, ಗದ್ದಿಗೌಡರ 2019ರಲ್ಲಿ ಗೆಲ್ಲುವ ಮೂಲಕ ಅವರ ದಾಖಲೆಯನ್ನು ಸರಿಗಟ್ಟಿದ್ದಾರೆ.

ನಾಲ್ಕು ಬಾರಿ ಗೆದ್ದ ಎಸ್.ಬಿ.ಪಾಟೀಲ: ಎಸ್.ಬಿ.ಪಾಟೀಲ ಅವರು ಮೊದಲ ಬಾರಿಗೆ 1962ರಲ್ಲಿ ಕಾಂಗ್ರೆಸ್‌ನಿಂದ ಸ್ಪರ್ಧಿಸಿ ಬಿಜೆಪಿಯ ಎನ್.ಕೆ.ಧರ್ಸಿ ಅವರ ವಿರುದ್ಧ ಗೆಲುವು ಸಾಧಿಸಿದ್ದರು. 1967ರಲ್ಲಿ ಪಕ್ಷೇತರ ಅಭ್ಯರ್ಥಿ ಎ.ಡಿ.ತೊಂಡಿಹಾಳ, 1972ರಲ್ಲಿ ಎಸ್.ಎಸ್.ಮೆಳ್ಳಿಗೇರಿ ಹಾಗೂ 1977ರಲ್ಲಿ ಭಾರತೀಯ ಲೋಕದಳದ ಕೆ.ಕೆ.ತುಂಗಳ ಅವರನ್ನು ಸೋಲಿಸುವ ಮೂಲಕ ಸತತ ನಾಲ್ಕು ಬಾರಿ ಗೆಲುವಿನ ನಗೆ ಬೀರಿ ಇತಿಹಾಸ ನಿರ್ಮಿಸಿದ್ದರು.

ಬಿಜೆಪಿಯಿಂದ ನಾಲ್ಕು ಬಾರಿ ಸಂಸದ: ಜನತಾ ಪಕ್ಷ ಬಿಟ್ಟು ಬಿಜೆಪಿ ಸೇರಿದ ಗದ್ದಿಗೌ ಡರು 2004ರಲ್ಲಿ ಮೊದಲ ಬಾರಿಗೆ ಬಿಜೆಪಿ ಯಿಂದ ಲೋಕಸಭೆಗೆ ಸ್ಪರ್ಧಿಸಿ ಎದುರಾಳಿ ಕಾಂಗ್ರೆಸ್‌ನ ಅಭ್ಯರ್ಥಿ ಹಾಗೂ ಅಂದಿನ ಸಂಸದ ಆರ್.ಎಸ್.ಪಾಟೀಲ ವಿರುದ್ಧ 1,67,383 ಮತಗಳನ್ನು ಪಡೆದು ಗೆಲುವಿನ ನಗೆ ಬೀರಿದ್ದರು. ನಂತರ 2009 ರಲ್ಲಿ ಕಾಂಗ್ರೆಸ್‌ನ ಜೆ.ಟಿ.ಪಾಟೀಲ ಅವರ ವಿರುದ್ಧ ಸ್ಪರ್ಧಿಸಿ 35,446 ಅಂತರದ ಮತಗಳಿಂದ ಗೆಲುವಿನ ನಗೆ ಬೀರಿದ್ದರು. 2014ರಲ್ಲಿ ಕಾಂಗ್ರೆಸ್‌ನ ಅಜಯಕುಮಾರ ಸರನಾಯಕ ಅವರ ವಿರುದ್ಧ 1,16,560 ಮತಗಳ ಅಂತರದಿಂದ ಗೆಲುವು ದಾಖಲಿಸಿದ್ದರು. 2019ರಲ್ಲಿ ವೀಣಾ ಕಾಶಪ್ಪನವರ ಅವರನ್ನು 1,68,187 ಅಂತರ ದಿಂದ ಸೋಲಿಸುವ ಮೂಲಕ ಕಾಂಗ್ರೆಸ್ ಅಭ್ಯರ್ಥಿಯ ದಾಖಲೆ ಸರಿಗಟ್ಟಿದ್ದಾರೆ.

ಪ್ರಲ್ಹಾದ್ ಜೋಶಿ ಬದಲಾಯಿಸಿ

ಹುಬ್ಬಳ್ಳಿ: ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಲಿಂಗಾಯತ ಮತ್ತು ಉಳಿದ ಸಮಾಜವನ್ನು ತುಳಿಯುತ್ತಿದ್ದಾರೆ. ಸ್ವಾಮೀಜಿಗಳನ್ನು ಅಪಮಾನಗೊಳಿಸಿದ್ದಾರೆ.

ಬಿಜೆಪಿ ವರಿಷ್ಠರು ಮಾ.31 ರೊಳಗೆ ಅವರಿಗೆ ನೀಡಿರುವ ಟಿಕೆಟ್ ಬದಲಾವಣೆ ಮಾಡಬೇಕು ಎಂದು ಶಿರಹಟ್ಟಿ ಮಠದ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಜೀ ಆಗ್ರಹಿಸಿ ದರು. ಸುದ್ದಿಗಾರರೊಂದಿಗೆ ಮಾತನಾಡಿ, ಟಿಕೆಟ್ ಬದಲಾವಣೆ ಆಗದಿದ್ದರೆ, ಏಪ್ರಿಲ್ 2 ರಂದು ಮತ್ತೊಮ್ಮೆ ಸಭೆ ನಡೆಸಿ, ನಿರ್ಧಾರ ಪ್ರಕಟಿಸಲಾಗುವುದು ಎಂದರು.

ಪ್ರಲ್ಹಾದ್ ಜೋಶಿ ಅವರಿಗೆ ಅಧಿಕಾರ ಮತ್ತು ಸಂಪತ್ತಿನ ಮದವೇರಿದ್ದು, ಲಿಂಗಾಯತ, ಕುರುಬ ಸೇರಿದಂತೆ ಎಲ್ಲ ಸಮುದಾಯವನ್ನು ತುಳಿದಿದ್ದಾರೆ. ಸ್ವಾಮೀಜಿಗಳನ್ನು ಅವಮಾನಿಸಿದ್ದಾರೆ. ನಮ್ಮ ವಿರೋಧ ಅವರ ವ್ಯಕ್ತಿತ್ವಕ್ಕೆ ಹೊರತು, ಪಕ್ಷ ಅಥವಾ ಸಮಾಜಕ್ಕೆ ಅಲ್ಲ. ಜಗದೀಶ್ ಶೆಟ್ಟರ್ ಅವರು ಕ್ಷೇತ್ರ ತ್ಯಾಗ ಮಾಡಿದಂತೆ ಅವರು ಕೂಡ ಕ್ಷೇತ್ರ ತ್ಯಾಗ ಮಾಡಬೇಕು ಎಂದರು.

ಕೇಂದ್ರ ಸಚಿವರು ಏಕಸ್ವಾಮ್ಯತ್ವವನ್ನು ಸಾಧಿಸುತ್ತಿದ್ದಾರೆ. ಹೀಗಾಗಿ ಧಾರವಾಡ ಲೋಕಸಭಾ ಕ್ಷೇತ್ರಕ್ಕೆ ಸೂಕ್ತ ಅಭ್ಯರ್ಥಿಯನ್ನು ಹಾಕಬೇಕು. ಏ.2 ರಂದು ಜೋಶಿ ಅವರ ಕ್ಷೇತ್ರ ಬದಲಾವಣೆ ವಿಚಾರಕ್ಕೆ ಸಂಬಂಧಿಸಿದಂತೆ ಮತ್ತೊಮ್ಮೆ ನೂರಾರು ಮಠಾಧೀಶರ ಸಮ್ಮುಖದಲ್ಲಿ ಸಭೆ ನಡೆಸಿ, ನಿರ್ಧಾರ ತೆಗೆದುಕೊಳ್ಳಲಾಗುತ್ತದೆ.

-ಫಕೀರ ದಿಂಗಾಲೇಶ್ವರ
ಮಹಾಸ್ವಾಮಿ ಶಿರಹಟ್ಟಿಮಠ

ಪ್ರಿಯಾಂಕಾ ಜಾರಕಿಹೊಳಿ ಸಮರ್ಥ

ಚಿಕ್ಕೋಡಿ: ರಾಜಕೀಯ ಕ್ಷೇತ್ರದಲ್ಲಿ ಅನು ಭವ ಕಾಲಾನುಕ್ರಮವಾಗಿ ಬರುತ್ತದೆ. ಪ್ರಿಯಾಂಕಾ ಜಾರಕಿಹೊಳಿ ಅವರ

ಮನೆಯಲ್ಲಿ ರಾಜಕೀಯ ನಾಯಕರು ಇರುವಾಗ ರಾಜಕೀಯ ಅನುಭವದ ಕೊರತೆ ಕಾಣುವುದಿಲ್ಲ ಶಾಸಕ ರಾಜು ಕಾಗೆ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ರಾಜಕಾರಣದಲ್ಲಿ ಸಣ್ಣ ವಯಸ್ಸು, ದೊಡ್ಡ ವಯಸ್ಸು ಎಂಬ ಚರ್ಚೆ ಅಪ್ರಸ್ತುತ. ಪ್ರಿಯಾಂಕಾ ಅವರ ಕುಟುಂಬದಲ್ಲಿ ಹಲವಾರು ಜನ ರಾಜಕೀಯ ಕ್ಷೇತ್ರದಲ್ಲಿ ಇರುವುದರಿಂದ ಅನುಭವ ಕೊರತೆ ಮತ್ತು ಚಿಕ್ಕ ವಯಸ್ಸು ಎಂದು ಹೇಳುವುದಕ್ಕೆ ಬರುವುದಿಲ್ಲ. ಮೀನಿನ ಮರಿಗೆ ಈಜು ಕಲಿಸುವುದಕ್ಕೆ ಆಗೋದಿಲ್ಲ. ಅದೇ ತರನಾಗಿ ಪ್ರಿಯಾಂಕಾ ಜಾರಕಿಹೊಳಿ ಅವರು ಕೂಡ ಇದ್ದಾರೆ. ನಾವು ಕೂಡ ಮೊದಲಿಗೆ ರಾಜಕೀಯಕ್ಕೆ ಬಂದಾಗ ನಮಗೂ ಕೂಡ ಮಾತನಾಡಕ್ಕೆ ಬರುತ್ತಿರಲಿಲ್ಲ. ನಾವು ಕಾಲಾನುಕ್ರಮವಾಗಿ ಪ್ರಭುತ್ವ ಸಾಧಿಸಿದ್ದೇನೆ ಎಂದರು.

ನಾನು ಬಿಜೆಪಿ ಮತ್ತು ಮೋದಿ ಪರ ಮತಯಾಚನೆ ಮಾಡುತ್ತೇನೆ. ಸಂಧಾನ ಸಭೆಯಲ್ಲಿ ಸಭೆಯಲ್ಲಿ ಲೋಕಸಭೆ ಚುನಾವಣೆ ಬಗ್ಗೆ ಪ್ರಮುಖ ವಿಷಯಗಳು ಚರ್ಚೆ ಆಗಿವೆ, ಆದರೆ ಎಲ್ಲವನ್ನು ಮಾಧ್ಯಮದ ಮುಂದೆ ಹೇಳಲು ಆಗುವುದಿಲ್ಲ. ಗಲಾಟೆ ವಿಚಾರಕ್ಕೆ ನೋ ಕಾಮೆಂಟ್ಸ್. ಬಿಜೆಪಿ ಶಿಸ್ತಿನ ಪಕ್ಷ, ಸಣ್ಣಪುಟ್ಟ ವ್ಯತ್ಯಾಸ ಇರುತ್ತದೆ. ಸ್ಥಾನ ಬದಲಾವಣೆಗೆ ಯಾವುದೇ ಪಟ್ಟು ಹಿಡಿದಿಲ್ಲ. ಮುಂದೆ ಏನಾಗುತ್ತದೆ ಅನ್ನೋದನ್ನು ಕಾದು ನೋಡೋಣ.

-ಎಂ.ಪಿ.ರೇಣುಕಾಚಾರ್ಯ
ಮಾಜಿ ಸಚಿವ

ಕಾಂಗ್ರೆಸ್ ನವರಿಗೆ ಈಗಲೇ ಭಯ ಶುರುವಾಗಿದೆ. ಕೇಸರಿ ವಿರೋಧಿಸಿದವರು, ದೇವಸ್ಥಾನಕ್ಕೆ ಹೋಗಲ್ಲ ಎನ್ನುವರು, ಕುಂಕುಮ ಹಚ್ಚಲ್ಲ ಎನ್ನುವವರು, ಹಸು ತಿಂದರೆ ಏನೂ ತಪ್ಪು ಎಂದು ಕೇಳುವವರು, ಪಾಕಿಸ್ತಾನ್ ಜಿಂದಾಬಾದ್ ಎನ್ನುವವರ ವಿರುದ್ಧ ಕ್ರಮ ಕೈಗೊಳ್ಳದ ಪಾರ್ಟಿಯವರು ಈಗ ಕೇಸರಿ ಧ್ವಜ ಇಟ್ಟುಕೊಂಡು ಓಡಾಡುತ್ತಿದ್ದಾರೆ. ಚುನಾವಣೆಯಲ್ಲಿ ಬಿಜೆಪಿಯ ಬಿರುಗಾಳಿಯಲ್ಲಿ ಕಾಂಗ್ರೆಸ್ ಕೊಚ್ಚಿ ಹೋಗುತ್ತದೆ.

-ರವಿಕುಮಾರ್
ವಿಧಾನಪರಿಷತ್ ಸದಸ್ಯ

ರಾಜ್ಯದಲ್ಲಿ ಹಿಂದುತ್ವ, ರಾಮನ, ಬಿಜೆಪಿ ಗಾಳಿಯೂ ಇಲ್ಲ. ಅದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಬಿಜೆಪಿ ಗ್ಯಾರಂಟಿ ಅನ್ನುವ ಬದಲು ಮೋದಿ ಗ್ಯಾರಂಟಿ ಅನ್ನುತ್ತಿದ್ದಾರೆ. ಕಾಂಗ್ರೆಸ್ ಗ್ಯಾರಂಟಿ ಅನ್ನುವುದನ್ನು ಕಟ್ ಮಾಡಿ ಮೋದಿ ಗ್ಯಾರಂಟಿ ಮಾಡಿಕೊಂಡಿದ್ದಾರೆ .
ಕರ್ನಾಟಕದಲ್ಲಿ ಎಲ್ಲಿಯೂ ಬಿಜೆಪಿ ಗಾಳಿಯಿಲ್ಲ. ಎಲ್ಲಾ ಕಡೆ ಕಾಂಗ್ರೆಸ್‌ಗೆ ಅನುಕೂಲವಾಗಲಿದೆ. ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಪರ ಇದ್ದಾರೆ.

-ಡಿ.ಕೆ ಶಿವಕುಮಾರ್
ಉಪಮುಖ್ಯಮಂತ್ರಿ

15 ವರ್ಷ ಗಿಳಿಯ ಹಾಗೆ ಸಾಕಿದೆ. ಆದರೆ, ಅದು ನನಗೆ ಮೋಸ ಮಾಡಿದೆ. ನಾನು ಸಚಿವನಾಗಿದ್ದಾಗ ಅರಸೀಕೆರೆಗೆ ಎಂಜಿನಿಯರಿಂಗ್ ಕಾಲೇಜು, ವಿದ್ಯುತ್ ಸೌಲಭ್ಯ ಸೇರಿದಂತೆ ಅನೇಕ ಸೌಕರ್ಯಗಳನ್ನು ಒದಗಿಸಿದ್ದೆ. ಆದರೆ, ನಾನು ಏನೂ ಮಾಡಿಲ್ಲ ಎಂದು ಕೆಲವರು ಅಪಪ್ರಚಾರ ಮಾಡುತ್ತಿದ್ದಾರೆ. ಜಿಲ್ಲೆಯ ಕೆರೆಗಳಿಗೆ ನೀರು ಹರಿಸದೆ ಪೊಲೀಸರ ಬಂದೋಬಸ್ತ್‌ನಲ್ಲಿ ತುಮಕೂರಿಗೆ ನೀರು ತೆಗೆದುಕೊಂಡು ಹೋದರು. ಈಗ ಜಿಲ್ಲೆಯ ಜನರ ಬಳಿ ಮತವನ್ನು ಹೇಗೆ ಕೇಳುತ್ತಾರೆ?.

-ಎಚ್.ಡಿ.ರೇವಣ್ಣ ಶಾಸಕ